## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖಾ ವತಿಯಿಂದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡಲು ವಾರ್ಷಿಕ ಆದಾಯ ಮಿತಿಯನ್ನು ನಿಗದಿಗೊಳಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರಿ ಆದೇಶ ಸಂಖ್ಯೆ: ಸಕಇ 5 ಬಿಸಿಎ 95, ದಿನಾಂಕ:1-9-95
2) ನಿರ್ದೇಶಕರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಹಿಂವಅನಿ:ವನಿಶಾ 1:ವಿನಿ 67: 95-96 ದಿನಾಂಕ:28-9-96.

\- - - -

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 1-9-95ರ ಆದೇಶದಲ್ಲಿ ಯಾವುದೇ ಆದಾಯ ಮಿತಿಯನ್ನು ಹೊಂದಿರದ ಪರಿಶಿಷ್ಟ ಜಾತಿ:ಪಂಗಡ ಹಾಗೂ ಇತರೇ ಹಿಂದುಳಿದ ವರ್ಗಗಳಲ್ಲಿನ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲಾ ಜಾತಿಯ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಹೊಂದಲು ಇರುವ ವಾರ್ಷಿಕ ಆದಾಯ ಮಿತಿಯನ್ನು ರೂ. 3,600-00 ಗಳಿಂದ ರೂ. 11,000-00 ಗಳಿಗೆ ಹಾಗೂ ವಿದ್ಯಾರ್ಥಿವೇತನ ಪಡೆಯಲು, ವಿದ್ಯಾರ್ಥಿನಿಲಯಗಳ ಪ್ರವೇಶ, ಆಶ್ರಮ ಶಾಲೆಗಳ ಪ್ರವೇಶ ಮತ್ತು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಇನ್ನಿತರ ಯೋಜನೆಗಳ ಸೌಲಭ್ಯಗಳನ್ನು ಹೊಂದಲು ವಾರ್ಷಿಕ ಆದಾಯ ಮಿತಿಯನ್ನು ರೂ. 10,000-00 ಗಳಿಂದ ರೂ. 15,000-00ಗಳಿಗೆ ಹೆಚ್ಚಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ:28-9-96ರ ಪತ್ರದಲ್ಲಿ ನಿರ್ದೇಶಕರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು ಇವರು ಅನುದಾನಿತ ಅನಾಥಾಲಯಗಳಲ್ಲಿ ಪ್ರವೇಶ ಪಡೆಯುವ ಅನಾಥ ಮತ್ತು ನಿರ್ಗತಿಕ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮಿತಿ ಬಹಳ ವರ್ಷಗಳಿಂದ ರೂ.3,000-00 ಗಳೇ ಇದ್ದು ಅನಾಥ ಮತ್ತು ನಿರ್ಗತಿಕ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆದಾಯ ಮಿತಿಯನ್ನು ಹೆಚ್ಚಿಸುವುದು ಅವಶ್ಯಕವೆಂದು ತಿಳಿಸುತ್ತಾ ಮೇಲೆ ಓದಲಾದ ದಿನಾಂಕ:1-9-95ರ ಆದೇಶದಲ್ಲಿ ವರ್ಗ-1ರ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲಾ ಜಾತಿಯ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಹೊಂದಲು ಇರುವ ವಾರ್ಷಿಕ ಆದಾಯ ಮಿತಿಯನ್ನು ರೂ. 3,600-00ಗಳಿಂದ ರೂ.11,000-00ಗಳಿಗೆ ಹೆಚ್ಚಿಸಿರುವಂತೆ ಅನಾಥ ಮತ್ತು ನಿರ್ಗತಿಕ ವಿದ್ಯಾರ್ಥಿಗಳನ್ನು ಅನುದಾನಿತ ಅನಾಥಾಲಯಗಳಿಗೆ ದಾಖಲೆ ಮಾಡಿ ಕೊಳ್ಳಲು ಇರುವ ವಿದ್ಯಾರ್ಥಿಗಳ ವಾರ್ಷಿಕ ಆದಾಯ ಮಿತಿಯನ್ನು ರೂ.3,600-00ಗಳಿಂದ ರೂ. 11;000-00ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲು ಕೋರಿರುತ್ತಾರೆ. ಸರ್ಕಾರವು ಪ್ರಸ್ತಾವನೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಕಇ 171 ಬಿಸಿಎ 95, ಬೆಂಗಳೂರು, ದಿನಾಂಕ:11-7-97

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಇತರೇ ಹಿಂದುಳಿದ ವರ್ಗಗಳಲ್ಲಿನ ವರ್ಗ -1ರ ಅಭ್ಯರ್ಥಿಗಳನ್ನು ಹೊರತುಪಡಿಸಿ ಇನ್ನುಳಿದ ವರ್ಗಗಳಾದ ವರ್ಗ-2(ಎ), 2(ಬಿ),3(ಎ) ಮತ್ತು 3(ಬಿ) ಗಳ ಅನಾಥ ಮತ್ತು ನಿರ್ಗತಿಕ ವಿದ್ಯಾರ್ಥಿಗಳನ್ನು ಸರ್ಕಾರದ ಅನುದಾನಿತ ಅನಾಥಾಲಯಗಳಿಗೆ ದಾಖಲು ಮಾಡಿಕೊಳ್ಳಲು ಇರುವ ವಾರ್ಷಿಕ ಆದಾಯ ಮಿತಿಯನ್ನು ರೂ. 3,600-00ರಿಂದ ರೂ.11,000-00 ಗಳಿಗೆ ಹೆಚ್ಚಿಸಿದೆ.

.....2

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ -1499 ವೆಚ್ಚ-3:97 ದಿನಾಂಕ: 23-5-97ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್.ಕೊಳಿವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ,
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ ಮುದ್ರಿತ 2000 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸಿ ಕೊಡುವಂತೆ ಕೋರಿದೆ.

ಪ್ರತಿಯನ್ನು:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
3) ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
4) ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
5) ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳಿಗೆ
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು : ಕಾರ್ಯದರ್ಶಿಗಳು
7) ಎಲ್ಲಾ ವಿಭಾಗಾಧಿಕಾರಿಗಳು,
8) ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
9) ನಿರ್ದೇಶಕರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಬೆಂಗಳೂರು
10) ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
11) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
12) ಎಲ್ಲಾ ವಿಶ್ವವಿದ್ಯಾನಿಲಯಗಳ ರಿಜಿಸ್ಟ್ರಾರರವರಿಗೆ
13) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
14) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
15) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಮಂಡಳಿ, ಬೆಂಗಳೂರು
16) ಕಾರ್ಯದರ್ಶಿಗಳು, ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
17) ಎಲ್ಲಾ ಜಿಲ್ಲಾಧಿಕಾರಿಗಳಿಗೆ,
18) ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳಿಗೆ
19) ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ
20) ಪ್ರಧಾನ ಕಾರ್ಯದರ್ಶಿಗಳು:ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರಿಗೆ, ಸಮಾಜ ಕಲ್ಯಾಣ ಇಲಾಖೆ,
21) ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕರಿಗೆ, ಸಮಾಜ ಕಲ್ಯಾಣ ಇಲಾಖೆ,
22) ಸಮಾಜ ಕಲ್ಯಾಣ ಇಲಾಖೆಯ ಎಲ್ಲಾ ಅಧೀನ ಕಾರ್ಯದರ್ಶಿಗಳಿಗೆ
23) ವಾರದ ರಾಜ್ಯ ಪತ್ರ
24) ಪತ್ರಿಕಾ ಪ್ರಕಟಣೆಗೆ
25) ಶಾಖಾ ರಕ್ಷಾ ಕಡತ :ಹೆಚ್ಚುವರಿ.

ಹಿಅವ 46/97-98/29-7-97.

ಕೆಳಕಂಡ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

(1) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ

(2) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ

(3) ಎಲ್ಲಾ ತಾಲ್ಲೂಕಿನ ತಾಲ್ಲೂಕು ಕಲ್ಯಾಣಾಧಿಕಾರಿಗಳಿಗೆ.